# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 76 (154) |
| ಮಾನ್ಯ ಸದಸ್ಯರ ಹೆಸರು | : | ಡಾ. ಯತೀಂದ್ರ ಎಸ್.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 04.03.2025 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | KWIN City ಯೋಜನೆಯು ಯಾವ ಯಾವ ಉದ್ದೇಶಗಳನ್ನು ಒಳಗೊಂಡಿದೆ; | KWIN City ಯೋಜನೆಯು ಪ್ರಮುಖವಾಗಿ Knowledge-ಶೈಕ್ಷಣಿಕ ಸಂಸ್ಥೆಗಳಿಗೆ, Wellbeing–ವೈದ್ಯಕೀಯ/ಆರೋಗ್ಯ ಸಂಬಂಧಿತ ಸಂಸ್ಥೆಗಳಿಗೆ, Innovation-ಸಂಶೋಧನಾ ಸಂಸ್ಥೆಗಳ ಸ್ಥಾಪನೆಗೆ/ಹೂಡಿಕೆಗೆ ಹಾಗೂ ಇನ್ನಿತರ ಹೈಟೆಕ್ ಕೈಗಾರಿಕೆಗಳನ್ನು ಸ್ಥಾಪಿಸಲು ಅನುವಾಗುವಂತೆ ಕೈಗಾರಿಕಾ ಪ್ರದೇಶವನ್ನು ನಿರ್ಮಿಸುವ ಉದ್ದೇಶವನ್ನು ಒಳಗೊಂಡಿರುತ್ತದೆ.<br><br>ಸದರಿ ಯೋಜನೆಯ ಅನುಷ್ಠಾನಕ್ಕೆ ಪ್ರಮುಖವಾಗಿ ಉತ್ತಮ ರಸ್ತೆ ಸಂಪರ್ಕ, ಚರಂಡಿ ವ್ಯವಸ್ಥೆ, ನೀರು ಮತ್ತು ವಿದ್ಯುತ್ ಸಂಪರ್ಕ, Clover Leaf ಮಾದರಿಯ ಮೇಲುಸೇತುವೆ ರಸ್ತೆ, ಸಾಮಾನ್ಯ ತ್ಯಾಜ್ಯ ಸಂಸ್ಕರಣಾ ಘಟಕ (CETP) & ಕೊಳಚೆ ನೀರು ಸಂಸ್ಕರಣಾ ಘಟಕ (STP) ಸಂಪರ್ಕ ಇತ್ಯಾದಿ ಉತ್ಕೃಷ್ಠ ಮೂಲಭೂತ ಸೌಕರ್ಯಗಳನ್ನು ಒಳಗೊಂಡಿರುತ್ತದೆ.<br><br>ಪ್ರಥಮವಾಗಿ, ಈ ಯೋಜನೆಯನ್ನು ಬೆಂಗಳೂರು ಸಮೀಪ ಅನುಷ್ಠಾನಗೊಳಿಸುತ್ತಿದ್ದು, ತದನಂತರ ಬೇಡಿಕೆ ಅನುಸಾರವಾಗಿ ಮೈಸೂರಿನಲ್ಲಿ ಸ್ಥಾಪಿಸುವ ಸಂಬಂಧ ಪರಿಶೀಲಿಸಲಾಗುತ್ತದೆ. |
| ಆ) | ಈ ಯೋಜನೆಯ ಅನುಷ್ಠಾನಕ್ಕೆ ಇರಬೇಕಾದ ಮೂಲಭೂತ ಸೌಕರ್ಯಗಳು ಯಾವುವು; | |
| ಇ) | ಹಾಗಿದ್ದಲ್ಲಿ, ಮೈಸೂರು ಜಿಲ್ಲೆಯಲ್ಲಿ KWIN City ಯನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕಿದೆಯೇ; | |
| ಈ) | ಉದ್ದೇಶಿಸಿದ್ದಲ್ಲಿ, ಈ ಯೋಜನೆಯ ಅನುಷ್ಠಾನದ ಕ್ರಮವಾಗಿ ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದೆಯೇ; ಕೈಗೊಂಡಿದ್ದಲ್ಲಿ ಇತರೆ ಮಂಜೂರಾತಿ ವಿವರಗಳನ್ನು ಒದಗಿಸುವುದು? | |

**ಸಂಖ್ಯೆ: ಸಿಐ 106 ಐಎಪಿ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು